# ಬೆಂಗಳೂರು ವಿಶ್ವವಿದ್ಯಾಲಯ

ಜ್ಞಾನಭಾರತಿ, ಬೆಂಗಳೂರು –560056

ಸಂಖ್ಯೆ: ಎಸಿಎ.4/ಸ್ನಾ.ಪ./2019–20

ದಿನಾಂಕ: 23.07.2019

## ಸ್ನಾತಕೋತ್ತರ ಪದವಿ ಪ್ರವೇಶಾತಿ ಅಧಿಸೂಚನೆ

ಬೆಂಗಳೂರು ವಿಶ್ವವಿದ್ಯಾಲಯ ಜ್ಞಾನಭಾರತಿ ಆವರಣ, ಸ್ನಾತಕೋತ್ತರ ಕೇಂದ್ರ, ರಾಮನಗರ ಹಾಗೂ ಸಂಯೋಜಿತ ಕಾಲೇಜುಗಳಲ್ಲಿ, ಈ ಕೆಳಕಂಡ ಸ್ನಾತಕೋತ್ತರ ಕೋರ್ಸುಗಳ ಪ್ರವೇಶಕ್ಕೆ 2019–20ನೇ ಶೈಕ್ಷಣಿಕ ಸಾಲಿಗೆ ಅರ್ಜಿಗಳನ್ನು ಆಹ್ವಾನಿಸಿದೆ.

**ಎ. ಜ್ಞಾನಭಾರತಿ ಆವರಣ:**

1) **ಕಲಾ ನಿಕಾಯ:** **ಎಂ.ಎ.** – ಅರ್ಥಶಾಸ್ತ್ರ, ಆಂಗ್ಲ, ಹಿಂದಿ, ಇತಿಹಾಸ, ಪತ್ರಿಕೋದ್ಯಮ ಮತ್ತು ಸಂವಹನ, ಕನ್ನಡ, ತೌಲನಿಕ ಕನ್ನಡ, ತತ್ವಶಾಸ್ತ್ರ, ರಾಜ್ಯಶಾಸ್ತ್ರ, ಗ್ರಾಮೀಣಾಭಿವೃದ್ಧಿ ಅಧ್ಯಯನ, ಸಂಸ್ಕೃತ, ಸಮಾಜಶಾಸ್ತ್ರ, ತೆಲುಗು, ಉರ್ದು ಮಹಿಳಾ ಅಧ್ಯಯನ, ಪ್ರದರ್ಶನ ಕಲಾ, ನೃತ್ಯ (ಭರತನಾಟ್ಯ), ನಾಟಕ, ಸಂಗೀತ, ಮೃದಂಗ, ಸಮಾಜಕಾರ್ಯ (ಎಂ.ಎಸ್.ಡಬ್ಲ್ಯೂ), ಮತ್ತು ದೃಶ್ಯಕಲೆ.

   **ಸ್ವಂತ ಹಣದ ಕೋರ್ಸು:**

   **ಎಂ.ಎ.**– ಅಪರಾಧಶಾಸ್ತ್ರ, ಮಾಧ್ಯಮ ಅಧ್ಯಯನ, ಸಾರ್ವಜನಿಕ ಸಂಪರ್ಕ ಮತ್ತು ಜಾಹೀರಾತು.

2) **ವಿಜ್ಞಾನ ನಿಕಾಯ:** ಎಂ.ಎಸ್ಸಿ.– ಅನ್ವಯಿಕ ತಳಿಶಾಸ್ತ್ರ, ಅನ್ವಯಿಕ ಭೂಗರ್ಭಶಾಸ್ತ್ರ, ಜೀವರಸಾಯನಶಾಸ್ತ್ರ, ಜೀವತಂತ್ರಜ್ಞಾನ, ಸಸ್ಯಶಾಸ್ತ್ರ, ರಸಾಯನಶಾಸ್ತ್ರ, ಗಣಕ ವಿಜ್ಞಾನ, ವಿದ್ಯುನ್ಮಾನ ಮಾಧ್ಯಮ, ವಿದ್ಯುನ್ಮಾನ ವಿಜ್ಞಾನ, ಪರಿಸರ ವಿಜ್ಞಾನ, ಫ್ಯಾಷನ್ ಅಂಡ್ ಅಪೆರಲ್ ಡಿಸೈನ್, ಭೂಗೋಳಶಾಸ್ತ್ರ, ಯೋಗ ವಿಜ್ಞಾನ, ಜೀವ ವಿಜ್ಞಾನ, ಗಣಿತ ಶಾಸ್ತ್ರ, ಅಣುಜೀವ ವಿಜ್ಞಾನ, ಸೂಕ್ಷ್ಮಜೀವಶಾಸ್ತ್ರ, ಭೌತಶಾಸ್ತ್ರ, ಮನ:ಶಾಸ್ತ್ರ, ಮನ:ಶಾಸ್ತ್ರ ಸಮಾಲೋಚನೆ, ಸಂಖ್ಯಾಶಾಸ್ತ್ರ, ಪ್ರಾಣಿಶಾಸ್ತ್ರ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ (ಎಂ.ಎಲ್.ಐ.ಎಸ್.), (ಮೊದಲ ಎರಡು ಸೆಮಿಸ್ಟರ್‌ಗಳನ್ನು ಪೂರೈಸಿದ ನಂತರ ಬಯಸಿದಲ್ಲಿ ಸ್ನಾತಕ ಪದವಿಯೊಂದಿಗೆ ನಿರ್ಗಮಿಸಬಹುದು).

   **ಸ್ವಂತ ಹಣದ ಕೋರ್ಸು:**

   **ಎಂ.ಎಸ್ಸಿ**–ಫಿಲ್ಮ್ ಮೇಕಿಂಗ್, ವಿಧಿ ವಿಜ್ಞಾನ, ಗ್ರಾಫಿಕ್ಸ್ ಮತ್ತು ಅನಿಮೇಷನ್, ನೈಸರ್ಗಿಕ ವಿಪತ್ತು ನಿರ್ವಹಣೆ, ಘನತ್ಯಾಜ್ಯ ನಿರ್ವಹಣೆ, ಮತ್ತು ಭೌಗೋಳಿಕ ಮಾಹಿತಿ ವಿಜ್ಞಾನ.

3) **ವಾಣಿಜ್ಯ ನಿಕಾಯ:** ಎಂ.ಕಾಂ.

   **ಸ್ವಂತ ಹಣದ ಕೋರ್ಸು:** ಎಂ.ಕಾಂ (ಐಫ್.ಎ.), ಎಂ.ಟಿ.ಟಿ.ಎಂ.

4) **ಶಿಕ್ಷಣ ನಿಕಾಯ:** ಎಂ.ಎಡ್, ಬಿ.ಪಿ.ಎಡ್, ಎಂ.ಪಿ.ಎಡ್.

**ಬಿ. ರಾಮನಗರ ಸ್ನಾತಕೋತ್ತರ ಕೇಂದ್ರದಲ್ಲಿ ಒದಗಿಸಲಾಗುವ ವಿಷಯಗಳು: ಎಂ.ಎ.**– ಕನ್ನಡ, ಇತಿಹಾಸ, ರಾಜ್ಯಶಾಸ್ತ್ರ, ಸಮಾಜಶಾಸ್ತ್ರ, ಗ್ರಾಮೀಣಾಭಿವೃದ್ಧಿಅಧ್ಯಯನ, ಅರ್ಥಶಾಸ್ತ್ರ, ಎಂ.ಎಸ್.ಡಬ್ಲ್ಯೂ(ಸಮಾಜಕಾರ್ಯ), ಎಂ.ಎಸ್ಸಿ. (ಗಣಿತಶಾಸ್ತ್ರ) ಮತ್ತು ಎಂ.ಕಾಂ.

**ವಿಶ್ವವಿದ್ಯಾಲಯದಿಂದ ಸಂಯೋಜನೆಗೊಂಡ 54 ಸ್ನಾತಕೋತ್ತರ ಕಾಲೇಜುಗಳಲ್ಲಿ ಬೋಧಿಸುವ ವಿಷಯಗಳ ಬಗ್ಗೆ ಬೆಂಗಳೂರು ವಿಶ್ವವಿದ್ಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ನೋಡಬಹುದು.**

**ಸಿ. ಜ್ಞಾನಭಾರತಿ ಆವರಣ:**

1) **ಪಿ.ಜಿ ಡಿಪ್ಲೋಮ ಕೋರ್ಸು:** ಅಂಬೇಡ್ಕರ್ ಅಧ್ಯಯನ, ಜಿಯೋ ಇನ್ಫಾರ್ಮೆಟಿಕ್ಸ್, ರೂರಲ್ ಮ್ಯಾನೇಜ್‌ಮೆಂಟ್, ಯೋಗ ಅಧ್ಯಯನ. ಸ್ವಾಮಿ ವಿವೇಕಾನಂದ ಅಧ್ಯಯನ, ಮತ್ತು ಬೌದ್ಧ ಅಧ್ಯಯನ.

2) **ಸರ್ಟಿಫಿಕೇಟ್ ಕೋರ್ಸು:** ದಲಿತ್ ಮೂಮೆಂಟ್ ಮತ್ತು ಯೋಗ ಅಧ್ಯಯನ.

**ಸೂಚನೆ:** 1. ಸ್ವ-ಹಣಕಾಸು ಪಿ.ಜಿ ಕೋರ್ಸ್‌ಗಳು, ಪಿ.ಜಿ. ಡಿಪ್ಲೊಮಾ, ಡಿಪ್ಲೊಮಾ ಮತ್ತು ಸರ್ಟಿಫಿಕೇಟ್ ಕೋರ್ಸ್‌ಗಳ ಪ್ರತಿ ಕೋರ್ಸ್‌ಗೆ ಕನಿಷ್ಠ 20 ಅಭ್ಯರ್ಥಿಗಳ ಪ್ರವೇಶವಿದ್ದಲ್ಲಿ ಮಾತ್ರ ನಡೆಸಲಾಗುತ್ತದೆ. ಇಲ್ಲದಿದ್ದರೆ ಶುಲ್ಕವನ್ನು ಮರುಪಾವತಿಸಲಾಗುತ್ತದೆ.

2. ಪಿ.ಜಿ. ಡಿಪ್ಲೊಮಾ, ಡಿಪ್ಲೊಮಾ ಮತ್ತು ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಹಾಸ್ಟೆಲ್ ಸೌಲಭ್ಯಗಳು ಲಭ್ಯವಿಲ್ಲ.

Scanned by CamScanner

**ಅರ್ಜಿಯನ್ನು ಸಲ್ಲಿಸಲು ಮಾರ್ಗಸೂಚಿಗಳು:**

- ಪ್ರತಿಯೊಂದು ಸ್ನಾತಕೋತ್ತರ ಕೋರ್ಸಿಗೆ ಪ್ರತ್ಯೇಕ ಅರ್ಜಿ ಸಲ್ಲಿಸಬೇಕು.
- ಅರ್ಜಿ ನಮೂನೆ ಮತ್ತು ಅರ್ಹತೆ, ಸೀಟ್ ಮ್ಯಾಟ್ರಿಕ್ಸ್ ಮತ್ತು ಕೋರ್ಸುಗಳ ಶುಲ್ಕದ ಮಾಹಿತಿಗಳನ್ನು ಬೆಂಗಳೂರು ವಿಶ್ವವಿದ್ಯಾಲಯದ ಅಂತರಜಾಲ **www.bangaloreuniversity.ac.in** ನಲ್ಲಿ ನೋಡಬಹುದು.
- **ಅರ್ಜಿ ಶುಲ್ಕ:** ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರತಿ ಕೋರ್ಸಿಗೂ ರೂ.200/- ಮತ್ತು ಪರಿಶಿಷ್ಟ ಜಾತಿ/ಪಂಗಡ ಪ್ರವರ್ಗ-1/ ಹಾಗೂ ವಿಶೇಷ ಚೇತನಾರು (PWD) ಅಭ್ಯರ್ಥಿಗಳು ಪ್ರತಿ ಕೋರ್ಸಿಗೂ ರೂ.100/-ಗಳನ್ನು ಆನ್‌ಲೈನ್ ಮುಖಾಂತರ ಸಂದಾಯ ಮಾಡಬೇಕು ಮೂಲ ಶುಲ್ಕದ ರಸೀಧಿಯನ್ನು ಭರ್ತಿ ಮಾಡಿದ ಅರ್ಜಿಯ ಜೊತೆ ಲಗತ್ತಿಸಬೇಕು.
- ಅರ್ಜಿಗಳನ್ನು ಆನ್‌ಲೈನ್ ಮುಖಾಂತರ ಭರ್ತಿ ಮಾಡಲು ದಿನಾಂಕ 25.07.2019 ರಿಂದ ಆನ್‌ಲೈನ್ ಪೋರ್ಟಲ್ ತೆರೆದಿರುತ್ತದೆ.
- ಅಪೂರ್ಣ ಅರ್ಜಿಗಳನ್ನು ಯಾವುದೇ ಸೂಚನೆ ನೀಡದೆ ತಿರಸ್ಕರಿಸಲಾಗುವುದು (ಸೂಕ್ತ ದಾಖಲಾತಿಗಳು ಹಾಗೂ ಪ್ರಮಾಣ ಪತ್ರಗಳನ್ನು ಲಗತ್ತಿಸದ ಅರ್ಜಿಗಳನ್ನು).
- ಆನ್‌ಲೈನ್ ಮುಖಾಂತರ ಭರ್ತಿ ಮಾಡಿದ ಅರ್ಜಿಗಳ ಜೊತೆ ಸೀಟುಗಳ ಕೋರಿಕೆಗೆ ಬೇಕಾಗಿರುವ ಪೂರಕ ದಾಖಲೆಗಳನ್ನು ಲಗತ್ತಿಸಿರಬೇಕು ಆನ್‌ಲೈನ್ ಮುಖಾಂತರ ಅರ್ಜಿಸಲ್ಲಿಸುವ ಅಭ್ಯರ್ಥಿಗಳು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಆಯಾ ವಿಭಾಗದ ಮುಖ್ಯಸ್ಥರ ವಿಳಾಸಕ್ಕೆ ಅರ್ಜಿಗಳನ್ನು ಕಳುಹಿಸುವುದು.
- ಭರ್ತಿ ಮಾಡಿದ ಅರ್ಜಿಗಳನ್ನು ಕಳುಹಿಸ ಬೇಕಾಗಿರುವ ವಿಭಾಗಗಳ ವಿಳಾಸವನ್ನು ಬೆಂಗಳೂರು ವಿಶ್ವವಿದ್ಯಾಲಯದ ವೆಬ್‌ಸೈಟ್‌ಯಿಂದ ಪಡೆಯಬಹುದು.
- ಭರ್ತಿ ಮಾಡಿದ ಅರ್ಜಿಗಳನ್ನು ನಿಗದಿ ಪಡಿಸಿದ ಕೊನೆಯ 09.08.2019 ದಿನಾಂಕದ ನಂತರ ಸಲ್ಲಿಸುವ ಅಥವಾ ತಲುಪುವ ಅರ್ಜಿಗಳನ್ನು ಯಾವುದೇ ಮಾಹಿತಿ ನೀಡದೇ ಸಾರಸಗಟಾಗಿ ತಿರಸ್ಕರಿಸಲಾಗುವುದು.
- ರಾಮನಗರ ಸ್ನಾತಕೋತ್ತರ ಕೇಂದ್ರಗಳಲ್ಲಿ ಹಾಗೂ ಬೆಂಗಳೂರು ವಿಶ್ವವಿದ್ಯಾಲಯದ ಸಂಯೋಜಿತ ಕಾಲೇಜುಗಳಲ್ಲಿ ನಡೆಸುವ ಸ್ನಾತಕೋತ್ತರ ಕೋರ್ಸುಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಜ್ಞಾನ ಭಾರತಿ ಆವರಣದಲ್ಲಿಯೇ ಬೆಂಗಳೂರು ವಿಶ್ವವಿದ್ಯಾಲಯದ ಆಯಾಯ ವಿಷಯಗಳ ವಿಭಾಗಗಳ ಮುಖ್ಯಸ್ಥರಿಗೆ ಅರ್ಜಿಯನ್ನು ಸಲ್ಲಿಸಲು ಕೋರಲಾಗಿದೆ.
- ಎಂ.ಎಸ್ಸಿ ಆಡಿಯೋಲಜಿ ಅಂಡ್ ಸ್ಪೀಚ್ ಲಾಂಗ್ವೇಜ್ ಪಥೋಲಜಿ ಕೋರ್ಸುಗಳಿಗೆ ಭರ್ತಿ ಮಾಡಿದ ಅರ್ಜಿಗಳನ್ನು ಡೀನರು, ವಿಜ್ಞಾನ ನಿಕಾಯ, ಪ್ರಾಣಿಶಾಸ್ತ್ರ ವಿಭಾಗ, ಜ್ಞಾನ ಭಾರತಿ ಆವರಣ ಬೆಂಗಳೂರು ವಿಶ್ವವಿದ್ಯಾಲಯ ಬೆಂಗಳೂರು-560056 ರವರಿಗೆ ಸಲ್ಲಿಸಲು ಕೋರಿದೆ.
- ಮೇಲಿನ ವಿಷಯಗಳಿಗೆ ಸಂಬಂಧಪಟ್ಟಂತೆ ಹೆಚ್ಚಿನ ಮಾಹಿತಿಗಾಗಿ ಆಯಾಯ ವಿಭಾಗದ ಮುಖ್ಯಸ್ಥರನ್ನು ಸಂಪರ್ಕಿಸಬಹುದು.
- ಅಭ್ಯರ್ಥಿಗಳು ಅರ್ಜಿಗಳನ್ನು ತುಂಬುವ ಮೊದಲು, ಅರ್ಹತಾ ನಿಯಮ ನಿಬಂಧನೆಗಳು ಶುಲ್ಕಪಾವತಿಯ ಸ್ವರೂಪ ಮೊದಲಾದ ನಿರ್ದೇಶನಗಳಿಗಾಗಿ ಬೆಂಗಳೂರು ವಿಶ್ವವಿದ್ಯಾಲಯದ ಅಂತರ ಜಾಲ **www.bangaloreuniversity.ac.in** ಗೆ ಭೇಟಿ ನೀಡಲು ಸೂಚಿಸಲಾಗಿದೆ. ಅರ್ಜಿ ನಮೂನೆ ಅಂತರ ಜಾಲದಲ್ಲಿ ಲಭ್ಯವಿದೆ.
- ಅರ್ಜಿಯನ್ನು ತುಂಬುವ ಮೊದಲು ಬೆಂಗಳೂರು ವಿಶ್ವವಿದ್ಯಾಲಯದ ಅಂತರ ಜಾಲಕ್ಕೆ ಅಧಿಕೃತ e-mail ಗುರುತಿನೊಂದಿಗೆ ಲಾಗ್‌ಇನ್ ಆಗಬೇಕಾಗಿರುತ್ತದೆ. ಆದ್ದರಿಂದ ಅರ್ಜಿ ತುಂಬುವ ಮೊದಲು ಅಭ್ಯರ್ಥಿಗಳೆಲ್ಲರು ವೈಯಕ್ತಿಕ ಇ-ಮೇಲ್‌ಅನ್ನು ಸೃಷ್ಟಿಸಿಕೊಂಡು ಅರ್ಜಿ ತುಂಬುವ ಪ್ರಕ್ರಿಯೆಯನ್ನು ಆರಂಭಿಸಲು ಸೂಚಿಸಲಾಗಿದೆ.

| **ಅರ್ಜಿಗಳನ್ನು ವಿತರಿಸುವ, ಅರ್ಜಿಗಳನ್ನು ಸಲ್ಲಿಸುವ ಹಾಗೂ ಪ್ರವೇಶ ಪ್ರಕ್ರಿಯೆಯ ದಿನಾಂಕಗಳು:** | |
|---|---|
| ಅ) ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸುವ ದಿನಾಂಕ | 25.07.2019 |
| ಆ) ದಂಡ ಶುಲ್ಕವಿಲ್ಲದೆ ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕ | 05.08.2019 |
| ಇ) ರೂ.200/- ದಂಡ ಶುಲ್ಕದೊಂದಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 08.08.2019 |
| ಈ) ಆಯಾ ವಿಭಾಗಕ್ಕೆ ಅರ್ಜಿಗಳನ್ನು (Hard copy) ಸಲ್ಲಿಸಲು ಕೊನೆಯ ದಿನಾಂಕ | 09.08.2019 |
| ಉ) ಜೇಷ್ಠತಾ ಪಟ್ಟಿ ಪ್ರಕಟಿಸುವ ದಿನಾಂಕ | 14.08.2019 |
| ಊ) ಜೇಷ್ಠತಾ ಪಟ್ಟಿಯಲ್ಲಿನ ದೋಷಗಳ ಬಗ್ಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 17.08.2019 |
| ಋ) ಅಂತಿಮ ಜೇಷ್ಠತಾ ಪಟ್ಟಿ ಪ್ರಕಟಿಸುವ ದಿನಾಂಕ | 19.08.2019 |
| **ಎಲ್ಲಾ ಕೋರ್ಸ್‌ಗಳ ಪ್ರವೇಶ ಪ್ರಕ್ರಿಯೆ ದಿನಾಂಕವನ್ನು ನಂತರ ಪ್ರಕಟಿಸಲಾಗುವುದು** | |

**ಆದೇಶದ ಮೇರೆಗೆ,**

ಕುಲಸಚಿವರು 23/7/2019

ಗೆ,

1. ಡೀನ್ ಕಲಾ/ವಾಣಿಜ್ಯ/ವಿಜ್ಞಾನ/ಶಿಕ್ಷಣ/ಕಾನೂನು ನಿಕಾಯಗಳು, ಬೆಂಗಳೂರು ವಿಶ್ವವಿದ್ಯಾಲಯ,ಬೆಂಗಳೂರು.
2. ಎಲ್ಲಾ ವಿಭಾಗದ ಅಧ್ಯಕ್ಷರುಗಳು/ಸಂಯೋಜನಾಧಿಕಾರಿಗಳು, ಜ್ಞಾನಭಾರತಿ ಆವರಣ ಮತ್ತು ಸ್ನಾತಕೋತ್ತರ ಕೇಂದ್ರ ರಾಮನಗರ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು.

Scanned by CamScanner